# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 173 ಗ್ರಾಪಂಸಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:23-03-2019

## ಸುತ್ತೋಲೆ

ವಿಷಯ: ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಗ್ರಾಮ ಪಂಚಾಯತಿ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 22 ಗ್ರಾಪಂಸಿ 2014, ದಿನಾಂಕ: 10-09-2014.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 162 ಗ್ರಾಪಂಸಿ 2017 ದಿನಾಂಕ: 05-09-2017.

***

ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ರಲ್ಲಿ ಸರ್ಕಾರವು ಆದೇಶದ ಮೂಲಕ ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ನೇಮಕಾತಿ ವಿಧಾನ ಮತ್ತು ವೇತನ ಶ್ರೇಣಿಗಳನ್ನು ನಿಗಧಿಪಡಿಸಬಹುದಾಗಿದ್ದು, ಅದರಂತೆ ದಿನಾಂಕ: 10-09-2014 ರ ಸರ್ಕಾರದ ಆದೇಶದಲ್ಲಿ ಸಿಬ್ಬಂದಿ ವರ್ಗದ ಮಾದರಿ ನೇಮಕಾತಿ ವಿಧಾನ ಮತ್ತು ವೇತನ ಶ್ರೇಣಿ ನಿಗಧಿಪಡಿಸಿದೆ.

ಉಲ್ಲೇಖ(2) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮರಣ ಹೊಂದಿದ್ದಲ್ಲಿ ಅವರ ಅವಲಂಬಿತರು ಅನುಕಂಪದ ಆಧಾರದ ಮೇಲೆ ನೇಮಕಾತಿ ಹೊಂದಲು ಅರ್ಹರಿದ್ದಲ್ಲಿ, ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗೆ ಬೇರೆ ಅಭ್ಯರ್ಥಿಗಳನ್ನು ನೇಮಿಸಿಕೊಳ್ಳುವುದರ ಬದಲು, ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಅವರ ಅವಲಂಬಿತರನ್ನು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆಯನ್ನು ಪಡೆದು ಗ್ರಾಮ ಪಂಚಾಯತಿಗಳು ಅನುಕಂಪದ ಆಧಾರದ ಮೇಲೆ ನೇಮಿಸಲು ಅಗತ್ಯ ಕ್ರಮ ವಹಿಸುವಂತೆ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ.

ಉಲ್ಲೇಖ (1) ರ ಸರ್ಕಾರದ ಆದೇಶದ ರೀತ್ಯಾ ವಾಟರ್‌ಮೆನ್ ಹುದ್ದೆಗೆ ಎಸ್.ಎಸ್.ಎಲ್.ಸಿ.ಯನ್ನು ವಿದ್ಯಾರ್ಹತೆಯನ್ನಾಗಿ ನಿಗಧಿಪಡಿಸಲಾಗಿರುತ್ತದೆ. ಅನುಕಂಪದ ಆಧಾರದ ಮೇಲೆ ನೌಕರಿಯನ್ನು ನೀಡುವಾಗ ಹುದ್ದೆಗೆ ನಿಗಧಿಪಡಿಸಿದ ವಿದ್ಯಾರ್ಹತೆ ಇಲ್ಲದೆ ಇದ್ದಲ್ಲಿ ಅವರಿಗೆ ಯಾವ ಹುದ್ದೆಯನ್ನು ನೀಡಬೇಕೆಂದು ಎಂಬ ಬಗ್ಗೆ ಕೆಲವು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸರ್ಕಾರದ ಮಾರ್ಗದರ್ಶನವನ್ನು ಕೋರುತ್ತಿರುತ್ತಾರೆ.

The Karnataka Civil Services (Appointment on Compassionate Grounds) Rules, 1996 ರ ನಿಯಮ 4(3) ಈ ಕೆಳಕಂಡಂತಿದೆ.

**4. Conditions of Appoinment:-**

"(3) Person seeking appointment should possess the minimum qualification specified for the post in the relevant rules of recruitment specially made respect of any service or post.

Provided that nothing in this sub-rule and sub-rule (5) of rule 5 of the Karnataka Civil Services (General Recruitment) Rules, 1977 in so far as it relates to educational qualification, shall apply to appointment under these rules to any Group "D" post."

ಮೇಲ್ಕಂಡ ನಿಯಮಗಳಲ್ಲಿ ರಾಜ್ಯ ಸಿವಿಲ್ ಸೇವೆಗೆ ಸೇರಿದ ಡಿ ಗ್ರೂಪ್ ಹುದ್ದೆಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಲು ಕನಿಷ್ಠ ವಿದ್ಯಾರ್ಹತೆಯಿಂದ ವಿನಾಯಿತಿ ನೀಡಿರುವುದರಿಂದ ಅದೇ ರೀತಿ ಗ್ರಾಮ ಪಂಚಾಯತಿಗಳ ನೌಕರರು ಮರಣ ಹೊಂದಿದಾಗ ಅವರ ಅವಲಂಬಿತರನ್ನು ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳುವಂತೆ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಿದೆ.

1) ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಮಂಜೂರಾಗಿರುವ 1) ಬಿಲ್‌ಕಲೆಕ್ಟರ್, 2) ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳನ್ನು ಗ್ರೂಪ್ "ಸಿ" ವೃಂದದ ಹುದ್ದೆಗಳೆಂದು ಪರಿಗಣಿಸಿ ದಿನಾಂಕ:10-09-2014 ರ ಆದೇಶದಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆ ಹೊಂದಿ ಅರ್ಜಿ ಸಲ್ಲಿಸಿದ್ದಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇಮಿಸುವುದು ಮತ್ತು;

2) 1) ವಾಟರ್‌ಮೆನ್ / ಪಂಪ್ ಆಪರೇಟರ್ / ಪಂಪ್ ಮೆಕಾನಿಕ್, 2) ಜವಾನ ಮತ್ತು 3) ಸ್ವಚ್ಛತಾಗಾರ ಹುದ್ದೆಗಳನ್ನು ಗ್ರೂಪ್ "ಡಿ" ವೃಂದದ ಹುದ್ದೆಗಳೆಂದು ಪರಿಗಣಿಸಿ ವಿದ್ಯಾರ್ಹತೆಯನ್ನು ಪರಿಗಣಿಸದೆ ಖಾಲಿ ಇರುವ ಹುದ್ದೆಗಳಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುವುದು.

23/3/19

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
3. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.